ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೫೯

# ಪಟ್ಟಿ – ೦೬

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತೆಂಟನೆಯ ಅಧಿವೇಶನ**

**ಸೋಮವಾರ, ದಿನಾಂಕ : ೨೨ನೇ ಜುಲೈ, ೨೦೧೯**

---

## ಸಮೂಹ – I

೧. ಕೃಷಿ ಸಚಿವರು.

೨. ಸಮಾಜ ಕಲ್ಯಾಣ ಸಚಿವರು.

೩. ಸಹಕಾರ ಸಚಿವರು.

೪. ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೫. ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು.

೬. ತೋಟಗಾರಿಕೆ ಸಚಿವರು.

೭. ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು.

---

## ಐತಿಹಾಸಿಕ ಪ್ರಸಿದ್ಧ ಸುರಂಗಬಾವಿಗಳ ಕಾಮಗಾರಿ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೪೨೧ (೪೫೮) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಐತಿಹಾಸಿಕ ಪ್ರಸಿದ್ಧ ಪಡೆದ ಸುರಂಗ ಬಾವಿ (KAREZ) ಕಾಮಗಾರಿಯನ್ನು ಯಾವ ಯಾವ ಜಿಲ್ಲೆಗಳಲ್ಲಿ ಕೈಗೊಳ್ಳಲಾಗಿದೆ; (ಪುನರುತ್ಥಾನದ ಕಾಮಗಾರಿ)

(ಆ) ಈ ಪ್ರಸಿದ್ಧ ಸುರಂಗ ಬಾವಿಗಳನ್ನು ಬೀದರ್ ಜಿಲ್ಲೆಯಲ್ಲಿ ಪತ್ತೆ ಹಚ್ಚಲಾಗಿದೆಯೇ ; ಪತ್ತೆ ಹಚ್ಚಿದ್ದಲ್ಲಿ ಅದಕ್ಕೆ ಸರ್ಕಾರ ಈವರೆಗೆ ಯಾವ ಯಾವ ಇಲಾಖೆಯಿಂದ ಎಷ್ಟು ಅನುದಾನ ಮಂಜೂರು ಮಾಡಿದೆ ;

(ಇ) ಈ ಪುನರುತ್ಥಾನದ ಕಾಮಗಾರಿ ಚಾಲ್ತಿಯಲ್ಲಿ ಇದೆಯೇ ಅಥವಾ ಸ್ಥಗಿತಗೊಳಿಸಲಾಗಿದೆಯೇ ; ಸ್ಥಗಿತಗೊಳಿಸಿದ್ದರೆ ಕಾರಣಗಳನ್ನು ತಿಳಿಸುವುದು ;

(ಈ) ಕಾಮಗಾರಿ ಪೂರ್ಣಗೊಳಿಸಿ ಪ್ರವಾಸಿ ತಾಣಗಳನ್ನಾಗಿ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಉ) ಕೇಂದ್ರ ಸರ್ಕಾರದ ಪ್ರಸಾದ್ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆ ಹಾಗೂ ಸುತ್ತಲಿನ ಜಿಲ್ಲೆಗಳು ಸೇರಿದಂತೆ ಪ್ರವಾಸೋದ್ಯಮ ಸರ್ಕ್ಯೂಟ್‌ನಲ್ಲಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾದ ಪ್ರಸ್ತಾವನೆ ಯಾವ ಹಂತದಲ್ಲಿದೆ ?

# ಹೈದರಾಬಾದ್ ಕರ್ನಾಟಕ ಪ್ರದೇಶದ ವಿವಿಧ ಇಲಾಖೆಯಲ್ಲಿ ಹುದ್ದೆಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೪೨೨ (೪೫೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್ ಕರ್ನಾಟಕ ಪ್ರದೇಶದ ವಿವಿಧ ಇಲಾಖೆಯಲ್ಲಿ ಗ್ರೂಪ್, ಎ, ಬಿ, ಸಿ ಮತ್ತು ಡಿ ವೃಂದಗಳಲ್ಲಿ ಪದೋನ್ನತಿ ಮುಖಾಂತರ ಭರ್ತಿ ಮಾಡಬೇಕಾದ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಈ ಪೈಕಿ ಸಹಕಾರ ಇಲಾಖೆಯಲ್ಲಿ ಎ, ಬಿ, ಸಿ ಮತ್ತು ಡಿ ವೃಂದಗಳಲ್ಲಿ ಪದೋನ್ನತಿ ಮುಖಾಂತರ ಭರ್ತಿ ಮಾಡದಿರುವ ಖಾಲಿ ಹುದ್ದೆಗಳು ಎಷ್ಟು ;

(ಇ) ಇಲ್ಲಿಯವರೆಗೆ ಸಹಕಾರ ಇಲಾಖೆಯಲ್ಲಿ ಎ, ಬಿ, ಸಿ ಮತ್ತು ಡಿ ವೃಂದಗಳಲ್ಲಿ ಪದೋನ್ನತಿ ಮುಖಾಂತರ ಭರ್ತಿ ಮಾಡಿದ ಹುದ್ದೆಗಳ ಸಂಖ್ಯೆ ಎಷ್ಟು ;

(ಈ) ಹೈದರಾಬಾದ್ ಕರ್ನಾಟಕ ಪ್ರದೇಶದ ವ್ಯಾಪ್ತಿಗೊಳಪಡುವ ಸಹಕಾರ ಇಲಾಖೆಯಲ್ಲಿ ಎ, ಬಿ, ಸಿ ಮತ್ತು ಡಿ ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಪದೋನ್ನತಿ ಮುಖಾಂತರ ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಬೀದರ್ ಜಿಲ್ಲೆಯ ಬೀದರ್ ಕೋಟೆಯ ಅಭಿವೃದ್ಧಿ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೪೨೩ (೪೫೭) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಪಾಪನಾಶ ಕೆರೆಯ, ಬಾಲ್ಕಿ, ಭಾತಂಬ್ರ ಬಸವ ಕಲ್ಯಾಣ ಮತ್ತು ಬೀದರ್ ಕೋಟೆಗಳ ಅಭಿವೃದ್ಧಿಗಾಗಿ ರೂ. ೯೫೦ ಲಕ್ಷಗಳು ಮಂಜೂರಾಗಿದ್ದು, ಸದರಿ ಕಾಮಗಾರಿ ಪ್ರಾರಂಭವಾಗಿದೆಯೇ ;

(ಆ) ಹಾಗಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ವೆಚ್ಚವಾಗಿದೆ ಮತ್ತು ಕಾಮಗಾರಿ ಯಾವ ಹಂತದಲ್ಲಿದೆ ?

## ಬೀದರ್ ಜಿಲ್ಲೆಯ ತೋಟಗಾರಿಕೆ ಅಭಿವೃದ್ಧಿ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೪೨೪ (೪೫೯) ಮಾನ್ಯ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆ ಅಭಿವೃದ್ಧಿಗಾಗಿ ಬೀದರ್ ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾದ ಯೋಜನೆಗಳಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಸುಮಾರು ೫೦೦೦ ಹೆಕ್ಟೆರು ಭೂಮಿಯಲ್ಲಿ ರೈತರು ಶುಂಠಿ ಬೆಳೆಯುತ್ತಿದ್ದು ಈ ಬೆಳೆಯನ್ನು ವಿಮೆಗೆ ಒಳಪಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಬೆಳೆ ವಿಮೆಗೆ ಒಳಪಡಿಸುವುದು ಯಾವಾಗ ?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಎಂಪ್ಲಾಯಿಸ್ ವೆಲ್‌ಫೇರ್ ಅಸೋಸಿಯೇಶನ್ ಸಂಘದ ಅವ್ಯವಹಾರಗಳ ಬಗ್ಗೆ

**ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ):–**

೪೨೫ (೪೭೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಎಂಪ್ಲಾಯಿಸ್ ವೆಲ್‌ಫೇರ್ ಅಸೋಸಿಯೇಶನ್ ಸಂಘದ ಅವ್ಯವಹಾರಗಳು ಹಾಗೂ ಕಾನೂನು ಬಾಹಿರ ನಿವೇಶನ ಹಂಚಿಕೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವಂತೆ ಇಲಾಖೆಯಿಂದ ಸರ್ಕಾರಕ್ಕೆ ಶಿಫಾರಸ್ಸು ಬಂದಿದೆಯೇ ;

(ಇ) ಬಂದಿದ್ದಲ್ಲಿ, ಯಾವಾಗ ಬಂದಿದೆ ; ಶಿಫಾರಸ್ಸಿನ ಯಥಾ ಪ್ರತಿಯನ್ನು ಒದಗಿಸುವುದು ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ; ಇಲ್ಲವಾದಲ್ಲಿ ಯಾವ ಕಾರಣಕ್ಕೆ ಶಿಫಾರಸ್ಸಿನ ಅನ್ವಯ ಕ್ರಮ ಕೈಗೊಂಡಿರುವುದಿಲ್ಲ ? (ವಿವರವಾದ ಮಾಹಿತಿ ನೀಡುವುದು)

## ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಶಿಕ್ಷಕ/ಸಿಬ್ಬಂದಿಗಳ ವರ್ಗಾವಣೆ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೪೨೬ (೬೬೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ವರ್ಷ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಶಿಕ್ಷಕ/ ಸಿಬ್ಬಂದಿಗಳ ವರ್ಗಾವಣೆಯನ್ನು ಯಾವ ರೀತಿಯಲ್ಲಿ ಮಾಡಲಾಗುವುದು ;

(ಆ) ಸಮಾಜ ಕಲ್ಯಾಣ ಇಲಾಖೆಯು ಕೌನ್ಸಿಲಿಂಗ್ ಮಾಡಲು ಮುಂದಾಗುವುದೇ ;

(ಇ) ಹಾಗಿದ್ದಲ್ಲಿ, ಕಾರ್ಯ ಯಾವ ಹಂತದಲ್ಲಿದೆ ; ತೆಗೆದುಕೊಂಡ ಕ್ರಮಗಳೇನು ; ತಯಾರಿಸಿರುವ ನಿಯಮಗಳೇನು ? (ನಿಯಮಗಳ ವಿವರವನ್ನು ಒದಗಿಸುವುದು)

## ಕಳಪೆ ಗುಣಮಟ್ಟದ ಕಟ್ಟಡ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೨೭ (೬೬೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ಬೆಳ್ಳೂರು ಹೋಬಳಿ ಕಾಳಿಂಗನಹಳ್ಳಿ ಪಂಚಾಯಿತಿ ವ್ಯಾಪ್ತಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಯುತ್ತಿರುವ ಇಂದಿರಾಗಾಂಧಿ ವಸತಿ ಶಾಲೆ ಕಟ್ಟಡದ ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಕಾಮಗಾರಿಯನ್ನು ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ ; (ಈ ಕಾಮಗಾರಿಯ ಅಂದಾಜು ವೆಚ್ಚದ ಪಟ್ಟಿ, ಅಂತಿಮ ಬಿಲ್ಲು ಮತ್ತು ಪ್ಲಾನ್‌ನೊಂದಿಗೆ ಗುತ್ತಿಗೆದಾರರ ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಕಟ್ಟಡದ ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಕಟ್ಟಡ ಕಾಮಗಾರಿಯ ಗುಣಮಟ್ಟದ ಬಗ್ಗೆ ಗುಣಮಟ್ಟ ಪರಿಶೀಲನಾ ಪ್ರಾಧಿಕಾರದಿಂದ ವರದಿ ಪಡೆಯಲಾಗಿದೆಯೇ ; (ವರದಿ ಪ್ರತಿ ಸಲ್ಲಿಸುವುದು)

(ಈ) ಈ ಕಾಮಗಾರಿಗೆ ಸಂಬಂಧಿಸಿದ ಇಂಜಿನೀಯರ್‌ಗಳು ಮತ್ತು ಗುತ್ತಿಗೆದಾರರ ಮೇಲೆ ಯಾವ ರೀತಿಯ ಕಾನೂನು ಕ್ರಮ ಕೈಗೊಳ್ಳಲಾಗಿದೆ ?

## ಮನಮುಲ್ ಡೈರಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೨೮ (೬೬೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆ, ಗೆಜ್ಜಲಗರೆ ಸಮೀಪವಿರುವ ಮನಮುಲ್ ಡೈರಿಯಲ್ಲಿ ಪ್ರಸ್ತುತ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ನೌಕರರನ್ನು ಪೂರೈಸಲು ಯಾವ ಏಜೆನ್ಸಿಗೆ ಗುತ್ತಿಗೆ ನೀಡಲಾಗಿದೆ ;

(ಆ) ಈ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುವ ವಿವಿಧ ವೃಂದದ ನೌಕರರಿಗೆ ನೀಡುವ ಮಾಸಿಕ ಗೌರವ ಧನದ ಮೊತ್ತವೆಷ್ಟು; ಕಳೆದ ಐದು ವರ್ಷಗಳಿಂದ ಈವರೆವಿಗೆ ಮನಮುಲ್ ಮತ್ತು ಏಜೆನ್ಸಿರವರ ಪಿ.ಎಫ್ ಮತ್ತು ಇ.ಎಸ್.ಐ ವಂತಿಗೆ ಮೊತ್ತವೆಷ್ಟು; ಮನಮುಲ್‌ನಿಂದ ನೀಡಿರುವ ಮೊತ್ತವೆಷ್ಟು ಹಾಗೂ ಏಜೆನ್ಸಿರವರು ಸಂದಾಯ ಮಾಡಿರುವ ಮೊತ್ತವೆಷ್ಟು ; (ಕಳೆದ ೦೫ ವರ್ಷಗಳ ವರ್ಷವಾರು ಮಾಹಿತಿ ನೀಡುವುದು)

(ಇ) ಈ ಗುತ್ತಿಗೆ ನೌಕರರ ಗೌರವ ಸಂಭಾವನೆ, ಪಿ.ಎಫ್ ಮತ್ತು ಇತರೆ ಸೌಲಭ್ಯಗಳನ್ನು ನೀಡುವಲ್ಲಿ ವಂಚನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾವ

ತನಿಖಾ ಸಂಸ್ಥೆಯಿಂದ ತನಿಖೆ ಮಾಡಿಸಲಾಗಿದೆ ; ಈ ಬಗ್ಗೆ ಕೈಗೊಂಡ ಕ್ರಮವೇನು ? (ವಿವರವಾದ ಮಾಹಿತಿ ನೀಡುವುದು)

## ಪ್ರಧಾನಮಂತ್ರಿ ಕಿಸಾನ್ ಯೋಜನೆಯಡಿ ರೈತರಿಗೆ ಸಿಗುವ ಸೌಲಭ್ಯಗಳು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೨೯ (೬೬೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಧಾನಮಂತ್ರಿ ಕಿಸಾನ್ ಯೋಜನೆಯಡಿ ರಾಜ್ಯಾದ್ಯಾಂತ ಈವರೆವಿಗೆ ಎಷ್ಟು ರೈತರು ನೋಂದಣಿ ಮಾಡಿಸಿದ್ದಾರೆ ; ಮಂಡ್ಯ ಜಿಲ್ಲೆಯಲ್ಲಿ ಈವರೆವಿಗೆ ಎಷ್ಟು ರೈತರು ನೋಂದಣಿ ಮಾಡಿಸಿದ್ದಾರೆ ; (ತಾಲ್ಲೂಕುವಾರು ಮಾಹಿತಿ ನೀಡುವುದು) ಈ ಯೋಜನೆಯಿಂದ ರೈತರಿಗೆ ಸಿಗುವ ಸೌಲಭ್ಯಗಳೇನು ;

(ಆ) ಹಾಗಿದ್ದಲ್ಲಿ, ಈ ಯೋಜನೆಗೆ ನೋಂದಣಿ ಮಾಡಲು ಪೌತಿ ಖಾತೆಗಳಿರುವವರಿಗೆ, ಜಂಟಿ ಖಾತೆಗಳಲ್ಲಿರುವವರಿಗೆ ಮತ್ತು ಅತೀ ಸಣ್ಣ ಹಿಡುವಳಿದಾರರಿಗೆ ಆನ್‌ಲೈನ್ ವ್ಯವಸ್ಥೆಯಲ್ಲಿ ಅವಕಾಶವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರೇಷ್ಮೆ ಹುಳು ಸಾಕಾಣಿಕೆ ಮನೆ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೩೦ (೬೬೭) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ ಮತ್ತು ೨೦೧೯–೨೦ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ರೇಷ್ಮೆ ಹುಳು ಸಾಕಾಣಿಕೆ ಮನೆ ನಿರ್ಮಾಣ ಮಾಡಲು ರೈತರಿಂದ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ರೇಷ್ಮೆ ಹುಳು ಸಾಕಾಣಿಕೆ ಮನೆ ನಿರ್ಮಾಣದ ಗುರಿ, ಸಾಧನೆ ಮತ್ತು ಉಳಿಕೆ ಎಷ್ಟು ? (ಪ್ರತಿ ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು)

## ರಾಜ್ಯದ ಒಳಗೆ ಮತ್ತು ಹೊರಗೆ ಇರುವ ಪ್ರವಾಸಿಮಂದಿರ ಮತ್ತು ಕರ್ನಾಟಕ ಭವನಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೩೧ (೬೬೯) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಒಳಗೆ ಮತ್ತು ಹೊರಗೆ ಇರುವ ಪ್ರಮುಖ ಪ್ರವಾಸಿ ತಾಣಗಳಲ್ಲಿ ಸರ್ಕಾರದ ವತಿಯಿಂದ ನಿರ್ಮಾಣವಾದ ಪ್ರವಾಸಿ ಮಂದಿರ ಮತ್ತು ಕರ್ನಾಟಕ ಭವನಗಳಲ್ಲಿ ಅಗತ್ಯ ಮೂಲ ಸೌಲಭ್ಯಗಳ ಮತ್ತು ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಮಂಡ್ಯ ಜಿಲ್ಲೆ ವ್ಯಾಪ್ತಿಯ ವಿವಿಧ ಪ್ರವಾಸಿ ತಾಣಗಳಲ್ಲಿ ಈವರೆವಿಗೆ ಎಷ್ಟು ಯಾತ್ರಿ ನಿವಾಸಗಳನ್ನು ನಿರ್ಮಾಣ ಮಾಡಲಾಗಿದೆ ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು) ಕಾಮಗಾರಿ ಅಪೂರ್ಣಗೊಂಡಿರುವ ಯಾತ್ರಿನಿವಾಸಗಳ ಸಂಖ್ಯೆ ಎಷ್ಟು ; ಕಾಮಗಾರಿ ವಿಳಂಬಕ್ಕೆ ಕಾರಣವೇನು ;

(ಇ) ಕಾಮಗಾರಿ ಪೂರ್ಣಗೊಂಡು ಉದ್ಘಾಟನೆಯಾಗದಿರುವ ಯಾತ್ರಿ ನಿವಾಸಗಳ ಸಂಖ್ಯೆ ಎಷ್ಟು : ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ದೇವದುರ್ಗ APMC Yardನಲ್ಲಿ Cold Storage ನಿರ್ಮಾಣದ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೩೨ (೪೮೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ ದೇವದುರ್ಗ APMC Yardನಲ್ಲಿ Cold Storage ನಿರ್ಮಾಣದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವಾಗ ನಿರ್ಮಾಣ ಮಾಡಲಾಗುವುದು ?

## ರಾಯಚೂರು ಜಿಲ್ಲೆಗೆ ಮಂಜೂರಾಗಿರುವ ಕೃಷಿ ಯೋಜನೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೪೩೩ (೬೪೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯುಚೂರು ಜಿಲ್ಲೆಯಲ್ಲಿ ನಿರ್ಮಾಣಗೊಂಡಿರುವ ಕೃಷಿ ಹೊಂಡಗಳ ಸಂಖ್ಯೆ ಎಷ್ಟು ; ಸದರಿ ಕೃಷಿ ಹೊಂಡಗಳ ನಿರ್ಮಾಣಕ್ಕೆ ಸರ್ಕಾರ ನೀಡಿರುವ ಅನುದಾನ ಎಷ್ಟು ; ಇನ್ನು ಬಾಕಿ ನೀಡಬೇಕಾಗಿರುವ ಅನುದಾನ ಎಷ್ಟು ;

(ಆ) ೨೦೧೮–೧೯ ಹಾಗೂ ೨೦೧೯–೨೦ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಕೃಷಿ ಇಲಾಖೆಯಿಂದ ಜಾರಿಗೊಂಡಿರುವ ಯೋಜನೆಗಳು ಯಾವುವು ; ಈ ಯೋಜನೆಗಳಿಗೆ ಸರ್ಕಾರ ನೀಡಿರುವ ಅನುದಾನ ಎಷ್ಟು ;

## ರಾಯಚೂರು ಜಿಲ್ಲೆಗೆ ಮಂಜೂರಾಗಿರುವ ವಿವಿಧ ಯೋಜನೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೪೩೪ (೬೪೪) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

೨೦೧೩–೧೪ರಿಂದ ಇಲ್ಲಿಯವರೆಗೂ ರಾಯಚೂರು ಜಿಲ್ಲೆಗೆ ಹಿಂದುಳಿದ ವರ್ಗಗಳಲ್ಲಿ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ಯೋಜನೆಗಳು ಯಾವುವು ; ಈ ಯೋಜನೆಗಳಿಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು ?

## ಗಂಗಾ ಕಲ್ಯಾಣ ಎಸ್.ಸಿ.ಪಿ. ಹಾಗೂ ಟಿ.ಎಸ್.ಪಿ. ಯೋಜನೆಯ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೪೩೫ (೬೪೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ ಮತ್ತು ೨೦೧೯–೨೦ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಮಂಜೂರಾಗಿರುವ ಕೊಳವೆ ಬಾವಿಗಳು ಎಷ್ಟು ; ಈ ಯೋಜನೆವಾರು ಫಲಾನುಭವಿಗಳ ಸಂಖ್ಯೆ ಎಷ್ಟು ; ಸದರಿ ಕೊಳವೆ ಬಾವಿ ನಿರ್ಮಾಣಕ್ಕೆ ಖರ್ಚಾಗಿರುವ ಮೊತ್ತ ಎಷ್ಟು ; ಈ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಎಸ್.ಸಿ.ಪಿ. ಹಾಗೂ ಟಿ.ಎಸ್.ಪಿ. ವಿವಿಧ ಯೋಜನೆಗಳಲ್ಲಿ ಫಲಾನುಭವಿಗಳ ಸಂಖ್ಯೆ ಎಷ್ಟು ; ಈ ಯೋಜನೆಗೆ ಖರ್ಚಾಗಿರುವ ವೆಚ್ಚ ಎಷ್ಟು ?

## ರಾಯಚೂರು ಜಿಲ್ಲೆಯಲ್ಲಿರುವ ಮಾವಿನ ಕೆರೆ (ಪ್ರವಾಸಿಕೆರೆ) ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೪೩೬ (೬೪೬) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಯಚೂರು ನಗರದಲ್ಲಿರುವ ಪ್ರಾಚೀನ ಕಾಲದ ಮಾವಿನ ಕೆರೆ ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಏನು ?

## ಮರಾಠಿ ಸಮಾಜವನ್ನು ೩ 'ಬಿ' ಯಿಂದ ೨ (ಎ)ಗೆ ಸೇರಿಸುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೩೭ (೬೪೯) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಂಕರಪ್ಪನವರ ವರದಿಯಂತೆ ಮರಾಠಾ ಸಮಾಜವನ್ನು ಕೂಡಲೇ ೩ 'ಬಿ' ಯಿಂದ ೨(ಎ)ಗೆ ಸೇರಿಸಲು ಶಿಫಾರಸ್ಸು ಮಾಡಲು ಮರಾಠಾ ಸಮಾಜದವರು ಪ್ರತಿಭಟನೆ ಮಾಡಿ ರಾಜ್ಯ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದ್ದು, ಇಲ್ಲಿಯವರೆಗೆ ಸರ್ಕಾರ ಯಾವುದೇ ತರಹದ ನಿರ್ಧಾರ ಕೈಗೊಳ್ಳದಿರುವುದರಿಂದ ಮರಾಠಾ ಸಮಾಜದವರು ಮುಂದಿನ ದಿನಗಳಲ್ಲಿ ಉಗ್ರ ಪ್ರತಿಭಟನೆ ಕೈಗೊಳ್ಳಲು ತೀರ್ಮಾನಿಸಿದ್ದು ; ಈ ವಿಷಯದಲ್ಲಿ ಸರ್ಕಾರ ಕೂಡಲೇ ಕ್ರಮಕೈಗೊಳ್ಳುವುದೇ ; (ವಿವರ ನೀಡುವುದು)

(ಆ) ಈಗಾಗಲೇ ಪಕ್ಕದ ಮಹಾರಾಷ್ಟ್ರ ರಾಜ್ಯದಲ್ಲಿ ಮರಾಠಾ ಸಮಾಜಕ್ಕೆ ಸಂಬಂಧಿಸಿದಂತೆ (ಅಲ್ಲಿಯ ರಾಜ್ಯ ಸರ್ಕಾರ ಸದರಿ ವಿಷಯದಲ್ಲಿ)

ಸೂಕ್ತ ಅನುಕೂಲ ಮಾಡಿಕೊಟ್ಟಂತೆ, ಇಲ್ಲಿಯ ಮರಾಠರಿಗೂ ಅದೇ ರೀತಿಯ ಸೌಲಭ್ಯ ಮಾಡಿಕೊಡಲು ತಾರತಮ್ಯ ಮಾಡುತ್ತಿರುವುದು ಸರಿಯೇ ? (ವಿವರ ನೀಡುವುದು)

## ಕುಣಬಿ ಜನಾಂಗವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೩೮ (೬೪೮) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯ ದಟ್ಟ ಕಾಡುಗಳಲ್ಲಿ ವಾಸಿಸುವ ಕುಣಬಿ ಜನಾಂಗ ಸಾಮಾಜಿಕವಾಗಿ ಶೈಕ್ಷಣಿಕವಾಗಿ ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಅತ್ಯಂತ ಹಿಂದುಳಿದವರಾಗಿದ್ದು, ಬುಡಕಟ್ಟು ಸಂಸ್ಕೃತಿಯ ಎಲ್ಲಾ ಗುಣ ಲಕ್ಷಣಗಳನ್ನು ಹೊಂದಿದ್ದು, ಹಲವಾರು ವರ್ಷಗಳಿಂದ ಕುಣಬಿ ಸಮಾಜವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಒತ್ತಾಯಿಸುತ್ತಾ, ಬಂದರೂ ಯಾವುದೇ ಪ್ರಯೋಜನವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಇವರನ್ನು ಯಾವ ಕಾರಣಕ್ಕಾಗಿ ಇಲ್ಲಿಯವರೆಗೆ ಪರಿಶಿಷ್ಟ ಪಂಗಡಕ್ಕೆ ಸೇರಿಸಿರುವುದಿಲ್ಲ ; ಈ ಕುರಿತು ಸರ್ಕಾರಕ್ಕೆ ಅನೇಕ ಭಾರಿ ವಿನಂತಿಸಿದ್ದು, ಸದರಿ ವಿಷಯದಲ್ಲಿ ಕುಲಪತಿಗಳಿಂದ ಅಧ್ಯಯನ ನಡೆಸಿ ವರದಿ ಪಡೆಯುವುದಾಗಿ ತಿಳಿಸಿದ್ದು, ಇಲ್ಲಿಯವರೆಗೆ ಯಾವುದೇ ರೀತಿಯಲ್ಲಿ ಕ್ರಮಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ನಡೆಸಲ್ಪಡುವ ವಸತಿ ಗೃಹ ಹಾಗೂ ವಾರ್ಡನ್ ಇವರ ಕರ್ತವ್ಯದ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೩೯ (೬೫೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುವ ವಸತಿ ಗೃಹಗಳ ಸಂಖ್ಯೆ ಎಷ್ಟು ; (ಬಾಲಕರ / ಬಾಲಕಿಯರ ವಸತಿ ಗೃಹಗಳ ವಿವರ ನೀಡುವುದು)

(ಆ) ಸದರಿ ವಸತಿ ಗೃಹಗಳಲ್ಲಿ ಇರುವ ವಾರ್ಡನ್‌ಗಳ ವಿವರ ನೀಡುವುದು ;

(ಇ) ಈಗಾಗಲೇ ಕೆಲವೊಂದು ಬಾಲಕಿಯರ ವಸತಿ ಗೃಹದಲ್ಲಿ ವಾರ್ಡನ್ ಹುದ್ದೆ ಗಂಡು ಮಕ್ಕಳು ನಿರ್ವಹಿಸುತ್ತಿರುವುದರಿಂದ ಕೆಲವೊಂದು ವಸತಿ ಗೃಹದಲ್ಲಿ ಅಹಿತಕರ ಘಟನೆ ನಡೆಯುತ್ತಿದ್ದು, ನಿಯಮದ ಪ್ರಕಾರ ಬಾಲಕಿಯರ ವಸತಿ ಗೃಹದಲ್ಲಿ ಹೆಣ್ಣು ಮಕ್ಕಳೇ ವಾರ್ಡನ್ ಹುದ್ದೆ ನಿಭಾಯಿಸಲು ಸರ್ಕಾರದ ಆದೇಶ ಇರುವುದೇ ; (ವಿವರ ನೀಡುವುದು)

(ಈ) ವಸತಿ ಗೃಹದಲ್ಲಿ ವಾಸ್ತವ್ಯ ಮಾಡುತ್ತಿರುವ ಹೆಣ್ಣು ಮಕ್ಕಳ ಹಿತದೃಷ್ಟಿಯಿಂದ ತಾಲ್ಲೂಕಿನಲ್ಲಿ ಬಾಲಕಿಯರ ವಸತಿ ಗೃಹಕ್ಕೆ ಹೆಣ್ಣು ಮಕ್ಕಳೇ ವಾರ್ಡನ್ ಹುದ್ದೆ ನಿಭಾಯಿಸಲು ಕ್ರಮ ಕೈಗೊಳ್ಳಲಾಗುವುದೇ ? (ವಿವರ ನೀಡುವುದು)

## ಗ್ರಾಮೀಣ ಜನರಿಗೆ ಹಸು, ಕುರಿ, ಎಮ್ಮೆಗಳನ್ನು ನೀಡುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೪೪೦ (೪೮೦) ಮಾನ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶುಸಂಗೋಪನಾ ಇಲಾಖೆ ವತಿಯಿಂದ ಗ್ರಾಮಾಂತರ ಪ್ರದೇಶದಲ್ಲಿರುವ ಗ್ರಾಮೀಣ ಜನರಿಗೆ ಎಮ್ಮೆ, ಹಸು, ಕುರಿಗಳನ್ನು ನೀಡುವ ಯೋಜನೆ ಇದೆಯೇ ;

(ಆ) ಇದ್ದಲ್ಲಿ, ಈ ಯೋಜನೆಯ ಮಾನದಂಡಗಳ ಬಗ್ಗೆ ವಿವರವಾದ ಮಾಹಿತಿ ನೀಡುವುದು ?

## ರಾಜ್ಯದಲ್ಲಿ ರೈತರಿಗೆ ಬೇಕಾಗುವ ರಸಗೊಬ್ಬರ ಅಸಮರ್ಪಕ ಪೂರೈಕೆಯಿಂದ ರೈತಾಪಿ ವರ್ಗಕ್ಕೆ ಆಗುತ್ತಿರುವ ತೊಂದರೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೧ (೬೫೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ರಸಗೊಬ್ಬರದ ಬೇಡಿಕೆ ಎಷ್ಟು ; (ವರ್ಗವಾರು ವಿವರ ನೀಡುವುದು)

(ಆ) ಈ ರಸಗೊಬ್ಬರವನ್ನು ಯಾವ ಯಾವ ಸಂಘ ಸಂಸ್ಥೆಗಳ ಮುಖಾಂತರ ವಿತರಿಸಲಾಗುತ್ತಿದೆ ;

(ಇ) ಸಹಕಾರಿ ಸಂಘಗಳ ಮುಖಾಂತರ ಆಗುವ ವಿತರಣೆಯ ಚಾನಲ್ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ವಿಳಂಬ ನೀತಿಯನ್ನು ಸರಿಪಡಿಸಿ, ರೈತರಿಗೆ ಸರಿಯಾದ ಸಮಯದಲ್ಲಿ ರಸಗೊಬ್ಬರ ಹಂಚಿಕೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದ ಉತ್ತರ ಕನ್ನಡ ಭಾಗದ ಪ್ರೇಕ್ಷಣಿಯ ಪ್ರವಾಸಿ ತಾಣಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಎದುರಿಸುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೨ (೬೫೬) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬–೧೭, ೨೦೧೭–೧೮ ಮತ್ತು ೨೦೧೮–೧೯ನೇ ಸಾಲಿನಲ್ಲಿ ಉತ್ತರ ಕರ್ನಾಟಕದ ಪ್ರೇಕ್ಷಣೀಯ ಪ್ರವಾಸಿ ತಾಣಗಳ ಅಭಿವೃದ್ಧಿ ಯೋಜನೆಗಳಿಗಾಗಿ ಮತ್ತು ಮೂಲ ಸೌಕರ್ಯಗಳಿಗಾಗಿ ಸರ್ಕಾರವು ಒದಗಿಸಿದ ಅನುದಾನವೆಷ್ಟು ; ಯಾವ ಯಾವ ಪ್ರವಾಸಿ ಸ್ಥಳಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ೨೦೧೬–೧೭, ೨೦೧೭–೧೮ ಮತ್ತು ೨೦೧೮–೧೯ನೇ ಸಾಲಿನಲ್ಲಿ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಬಿಡುಗಡೆ ಮಾಡಿದ ಅನುದಾನವೆಷ್ಟು ; ಯಾವ ಯಾವ ಪ್ರವಾಸಿ ತಾಣಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ;

(ಇ) ಉತ್ತರ ಕರ್ನಾಟಕ ಪ್ರವಾಸಿ ತಾಣಗಳ ಪರಿಚಯ ಮತ್ತು ಪ್ರಚಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ; ಇದಕ್ಕಾಗಿ ಎಷ್ಟು ಅನುದಾನ ವೆಚ್ಚ ಮಾಡಲಾಗಿದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಉತ್ಪಾದನೆಯಾಗುವ ಕೃಷಿ ಉತ್ಪನ್ನಗಳಿಗೆ ಬೇಕಾಗುವಷ್ಟು ದಾಸ್ತಾನು (Godown) ಅನುಕೂಲತೆ ಇರದಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೩ (೬೫೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರು ಉತ್ಪಾದಿಸುವ ಉತ್ಪನ್ನಗಳನ್ನು ಸಂಗ್ರಹಿಸಿಡಲು ಇರುವ ಗೋದಾಮುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯ ಉಗ್ರಾಣ ನಿಗಮದಿಂದ ನಡೆಸಲ್ಪಡುವ ಒಟ್ಟು ಉಗ್ರಾಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಂಗ್ರಹಣೆ ಸಾಮರ್ಥ್ಯಗಳ ವಿವರಗಳ ಮಾಹಿತಿ ನೀಡುವುದು)

(ಇ) ರಾಜ್ಯ ಉಗ್ರಾಣ ನಿಗಮದಡಿಯಲ್ಲಿ ಬರುವ ಗೋದಾಮುಗಳ ಒಟ್ಟು ಸಂಖ್ಯೆಯಲ್ಲಿ ಹಲವಾರು ಉಗ್ರಾಣಗಳಲ್ಲಿ ಅವಶ್ಯಕ ಸೌಲಭ್ಯ ಹಾಗೂ ಧಾನ್ಯಗಳ ರಕ್ಷಣೆಗೆ ಅನುಕೂಲತೆಗಳಿರುವ ಹಿನ್ನೆಲೆಯಲ್ಲಿ ದಾಸ್ತಾನುಗಳು ಕೆಟ್ಟುಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಉಗ್ರಾಣಗಳಲ್ಲಿ ಈ ತರಹದ ಸಮಸ್ಯೆಗಳ ನಿವಾರಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದ ಉತ್ತರ ಕರ್ನಾಟಕ ಭಾಗದಲ್ಲಿ ರೇಷ್ಮೆ ಉತ್ಪಾದನೆಗೆ ಯಾವುದೇ ಬೆಳವಣಿಗೆ ಆಗದಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

ಳಳಳ (೬೬೦) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಉತ್ಪಾದನೆಯಾಗುವ ರೇಷ್ಮೆ ಗೂಡುಗಳ ಪ್ರಮಾಣವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ರೇಷ್ಮೆ ಗೂಡುಗಳ ಮಾರಾಟಕ್ಕಾಗಿ ಇರುವ ಕೇಂದ್ರಗಳೇಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದ ಉತ್ತರ ಕರ್ನಾಟಕ ಭಾಗದಲ್ಲಿ ಅತಿ ಹೆಚ್ಚು ರೇಷ್ಮೆ ಕೃಷಿಯನ್ನು ಮಾಡಲಾಗುತ್ತಿದ್ದು, ಅದರ ಅಭಿವೃದ್ಧಿಗೆ ಹಾಗೂ ಬೆಳೆದ ರೇಷ್ಮೆಯ ಗೂಡು ಮಾರಾಟಕ್ಕಾಗಿ ಉತ್ತರ ಕರ್ನಾಟಕದ ಭಾಗದಲ್ಲಿ ಕೇಂದ್ರವೊಂದನ್ನು ಸ್ಥಾಪಿಸಲು ಸರ್ಕಾರ ಯೋಚಿಸಿದೆಯೇ ? (ವಿವರ ನೀಡುವುದು)

## ಅಧಿಕ ರಸಗೊಬ್ಬರ ಮತ್ತು ಕೀಟನಾಶಕಗಳ ಬಳಕೆಯಿಂದ ದುಷ್ಪರಿಣಾಮಗಳ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೫ (೪೭೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಧಿಕ ಇಳುವರಿ ಪಡೆಯುವ ಉದ್ದೇಶದಿಂದ ರೈತರು ಅಧಿಕ ಪ್ರಮಾಣದಲ್ಲಿ ಕೀಟನಾಶಕ ಮತ್ತು ರಸಗೊಬ್ಬರಗಳನ್ನು ಬಳಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಧಿಕ ಪ್ರಮಾಣದಲ್ಲಿ ರಸಗೊಬ್ಬರ ಮತ್ತು ಕ್ರಿಮಿನಾಶಕಗಳನ್ನು ಬಳಕೆ ಮಾಡುತ್ತಿರುವುದರಿಂದ ಜನರ ಆರೋಗ್ಯದ ಮೇಲೆ ಉಂಟಾಗುತ್ತಿರುವ ದುಷ್ಪರಿಣಾಮಗಳು ಯಾವುವು ; ಇದು ಸರ್ಕಾರದ ಅರಿವಿಗೆ ಬಂದಿದೆಯೇ ;

(ಇ) ಜನರ ಆರೋಗ್ಯದ ರಕ್ಷಣೆಯ ದೃಷ್ಟಿಯಿಂದ ರಸಗೊಬ್ಬರ ಮತ್ತು ಕ್ರಿಮಿನಾಶಕಗಳ ಬಳಕೆಯ ಬಗ್ಗೆ ರೈತರಿಗೆ ತಿಳುವಳಿಕೆಯನ್ನುಂಟು ಮಾಡುವ ಕಾರ್ಯಕ್ರಮಗಳನ್ನು ಸರ್ಕಾರದ ವತಿಯಿಂದ ಹಮ್ಮಿಕೊಳ್ಳಲಾಗಿದೆಯೇ ?

## ಜಾತಿ ಜನಗಣತಿ ವಿವರ

**ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೪೪೬ (೫೮೧) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಾತಿ ಜನಗಣತಿಯ ವಿವರಗಳನ್ನು ಇನ್ನೂ ಕೂಡ ಪ್ರಕಟಿಸದಿರಲು ಕಾರಣವೇನು ;

(ಆ) ಜಾತಿ ಜನಗಣತಿ ಪ್ರಕಟಿಸಿದರೆ ಈಗಿರುವ ಜಾತಿಗಳಲ್ಲಿ ಜನಸಂಖ್ಯೆ ಕಡಿಮೆಯಾಗುತ್ತಿದೆಯೇ ;

(ಇ) ಹಿಂದುಳಿದ ವರ್ಗಗಳಲ್ಲಿ ಅತಿ ಕಡಿಮೆ ಜನ ಸಂಖ್ಯೆಯಿರುವ ಜಾತಿಗಳಿಗೆ ಸಾಮಾಜಿಕ ನ್ಯಾಯ ದೊರಕಿಸಿ ಕೊಡಲು ಸರ್ಕಾರದ ಕ್ರಮಗಳೇನು ;

(ಈ) ಸರ್ಕಾರ ಜಾತಿ ಜನಗಣತಿಗಾಗಿ ಒಟ್ಟು ಖರ್ಚು ಮಾಡಿರುವ ಹಣವೆಷ್ಟು ?

## ರಾಜ್ಯದಲ್ಲಿರುವ ನಿಗಮಗಳಿಗೆ ನೀಡಿರುವ ಅನುದಾನ ಕುರಿತು

**ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೪೪೭ (೫೮೪) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತ ವರ್ಗಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳು (ವರ್ಗಗಳು) ಹಾಗೂ ಮೇಲ್ವರ್ಗಗಳು ಸೇರಿದಂತೆ ಒಟ್ಟು ಎಷ್ಟು ನಿಗಮಗಳಿವೆ ; ಸದರಿ ನಿಗಮಗಳನ್ನು ಯಾವಾಗ ಪ್ರಾರಂಭಿಸಲಾಗಿದೆ ; ಅವುಗಳಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಪ್ರತಿ ನಿಗಮಕ್ಕೂ ಪ್ರತ್ಯೇಕ ಅಧಿಕಾರಿಗಳನ್ನು ರಾಜ್ಯ ಮಟ್ಟದಲ್ಲಿ ನೇಮಿಸಲಾಗಿದೆಯೇ ;

(ಆ) ಪ್ರತಿಯೊಂದು ನಿಗಮಕ್ಕೂ ಎಷ್ಟೆಷ್ಟೂ ಅರ್ಜಿಗಳು ಮನವಿ ರೂಪದಲ್ಲಿ ಬಂದಿವೆ; ಅದಕ್ಕೆ ತಗಲುವ ಅನುದಾನವೆಷ್ಟು; ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು; ಅನುದಾನದ ಕೊರತೆಯಿಂದ ಉಳಿದಿರುವ ಅರ್ಜಿಗಳೆಷ್ಟು? (ಪ್ರತಿಯೊಂದು ಇಲಾಖೆ ನಿಗಮದ ವಿವರ ನೀಡುವುದು)

## ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೪೪೮ (೪೭೦) ಮಾನ್ಯ ಸಹಕಾರ ಸಚಿವರು ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಇರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸೇವಾ ಸಂಘ (ಪಿಎಸಿಸಿಎಸ್)ಗಳು ಎಷ್ಟು; (ವಿವರ ಒದಗಿಸುವುದು)

(ಆ) ಈ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸೇವಾ ಸಂಘಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಒಟ್ಟು ಅಧಿಕಾರಿ / ಸಿಬ್ಬಂದಿ ನೌಕರರೆಷ್ಟು; (ವಿವರ ಒದಗಿಸುವುದು)

(ಇ) ಈ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದು, ವಯೋನಿವೃತ್ತಿಯಿಂದ ನಿವೃತ್ತಿಯಾಗಿರುವ ಅಧಿಕಾರಿ / ಸಿಬ್ಬಂದಿಗಳೆಷ್ಟು; (ವಿವರ ಒದಗಿಸುವುದು)

(ಈ) ಕೃಷಿ ಪತ್ತಿನ ಸಹಕಾರ ಸೇವಾ ಸಂಘಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಂದ ಕೃಷಿ ಪತ್ತಿನ ಸಹಕಾರ ಸೇವಾ ಸಂಘಗಳಲ್ಲಿ ಕಳೆದ ೩ ವರ್ಷಗಳಿಂದ ಆಗಿರುವ ಹಣ ದುರಪಯೋಗದ ಬಗ್ಗೆ ಮಾಹಿತಿ ಹಾಗೂ ಅವರುಗಳ ಮೇಲೆ ಕೈಗೊಂಡ ಕಾನೂನಾತ್ಮಕ ಕ್ರಮಗಳೇನು ? (ವಿವರ ಒದಗಿಸುವುದು)

## ಡಾ॥ ಬಿ.ಆರ್. ಅಂಬೇಡ್ಕರ್ ಭವನಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೪೪೯ (೪೭೧) ಮಾನ್ಯ ಸಮಾಜ ಕಲ್ಯಾಣ ಸಚಿವರು ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ವಿಜಯಪುರ ಜಿಲ್ಲೆಯಾದ್ಯಂತ ಸಮಾಜ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ಡಾ: ಬಿ.ಆರ್. ಅಂಬೇಡ್ಕರ್ ಸಮುದಾಯ ಭವನಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)

(ಆ) ಇವುಗಳಲ್ಲಿ ಈಗಾಗಲೇ ಕಾಮಗಾರಿ ಪೂರ್ಣಗೊಂಡು ಕಾರ್ಯಾರಂಭಿಸಿರುವ ಸಮುದಾಯ ಭವನಗಳೆಷ್ಟು; (ವಿವರ ಒದಗಿಸುವುದು)

(ಇ) ಕಾಮಗಾರಿ ಅಪೂರ್ಣಗೊಂಡಿರುವ ಸಮುದಾಯ ಭವನಗಳೆಷ್ಟು; (ವಿವರ ಒದಗಿಸುವುದು) ಅಪೂರ್ಣಗೊಂಡಿರುವ ಸಮುದಾಯ ಭವನಗಳ ಕಾಮಗಾರಿಯುನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ? (ವಿವರ ಒದಗಿಸುವುದು)

## ಪ್ರವಾಸೋದ್ಯಮ ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೪೫೦ (೪೭೨) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ವಿಜಯಪುರ ಜಿಲ್ಲೆಯಾದ್ಯಂತ ಪ್ರವಾಸೋದ್ಯಮ ಇಲಾಖೆಯ ವತಿಯಿಂದ, ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಗುರುತಿಸಿರುವ ಪ್ರವಾಸಿ ತಾಣಗಳೆಷ್ಟು; (ವಿವರ ಒದಗಿಸುವುದು)

(ಆ) ಹಾಗಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸಲಾಗಿದೆ; (ವಿವರ ಒದಗಿಸುವುದು)

(ಇ) ಅಭಿವೃದ್ಧಿಪಡಿಸದೇ ಇರುವ ಪ್ರವಾಸಿ ತಾಣಗಳ ಸ್ಥಳಗಳನ್ನು ಗುರುತಿಸಿ ಯಾವಾಗ ಅಭಿವೃದ್ಧಿಪಡಿಸಲಾಗುವುದು ? (ವಿವರ ಒದಗಿಸುವುದು)

## ಅನಧಿಕೃತ ದಲ್ಲಾಳಿಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೪೫೧ (೫೮೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತಾಪಿ ವರ್ಗದವರು ಬೆಳೆದ ಭತ್ತ ಹಾಗೂ ದ್ವಿದಳ ಧಾನ್ಯಗಳನ್ನು ಅನಧಿಕೃತ ದಲ್ಲಾಳಿಗಳು ಕಡಿಮೆ ದರದಲ್ಲಿ ಮತ್ತು ತೂಕದಲ್ಲಿ ಮೋಸ ಮಾಡಿ ಖರೀದಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅನಧಿಕೃತ ದಲ್ಲಾಳಿಗಳನ್ನು ನಿಯಂತ್ರಿಸಲು ಸರ್ಕಾರವು ಕೈಗೊಂಡಿರುವ ಕಾನೂನು ರೀತಿಯ ಕ್ರಮಗಳೇನು; (ವಿವರ ನೀಡುವುದು)

(ಇ) ಇಲ್ಲಿಯವರೆಗೆ ಅನಧಿಕೃತ ದಲ್ಲಾಳಿಗಳ ಮೇಲೆ ದಾಖಲಿಸಿರುವ ಪ್ರಕರಣಗಳ ವಿವರ ಒದಗಿಸುವುದು ಮತ್ತು ಪ್ರಕರಣಗಳಿಗೆ ಸಂಬಂಧಿಸಿದಂತೆ ಕಾನೂನಾತ್ಮಕ ಕ್ರಮ ಕೈಗೊಂಡಿರುವ ಬಗ್ಗೆ ವಿವರ ಒದಗಿಸುವುದು ?

## ಶಿವಮೊಗ್ಗ ಜಿಲ್ಲೆಯ ರೈತರಿಗೆ ಸಾಲಮನ್ನಾ ಯೋಜನೆ ಪ್ರಯೋಜನ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೫೨ (೫೯೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯ ಎಷ್ಟು ರೈತರಿಗೆ ಸಾಲಮನ್ನಾ ಯೋಜನೆ ಪ್ರಯೋಜನವಾಗಿರುತ್ತದೆ; ಇದರ ಮೊತ್ತವೆಷ್ಟು;

(ಆ) ಸಹಕಾರಿ ಬ್ಯಾಂಕ್‌ಗಳಿಂದ ಎಷ್ಟು ಜನ ರೈತರಿಗೆ ಎಷ್ಟು ಸಾಲ ಮನ್ನಾವಾಗಿರುತ್ತದೆ; ಇನ್ನು ಉಳಿದಂತಹ ರೈತರಿಗೆ ಯಾವಾಗ ಸಾಲಮನ್ನಾ ಮಾಡಲಾಗುವುದು?

## ಪಶುಸಂಗೋಪನೆ ಇಲಾಖೆಯಲ್ಲಿರುವ ಯೋಜನೆಗಳು

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೫೩ (೫೯೨) ಮಾನ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶುಸಂಗೋಪನಾ ಇಲಾಖೆಯಲ್ಲಿರುವ ಯೋಜನೆಗಳು ಯಾವುವು; ಸದರಿ ಯೋಜನೆಯಲ್ಲಿ ರಾಜ್ಯದ ಹಾಗೂ ಕೇಂದ್ರದ ಪಾಲುಗಳೆಷ್ಟು; (ಸಂಪೂರ್ಣ ವಿವರ ನೀಡುವುದು)

(ಆ) ಪಶುಸಂಗೋಪನಾ ಇಲಾಖೆಯಲ್ಲಿರುವ ಯೋಜನೆಗಳನ್ನು ಪಡೆದುಕೊಳ್ಳಲು ಇರುವ ನಿಯಮಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ೨೦೧೬–೧೭ನೇ ಸಾಲಿನಿಂದ ಇಲ್ಲಿಯವರೆಗೆ ಪಶುಸಂಗೋಪನಾ ಇಲಾಖೆಯಿಂದ ಯಾವ ಯಾವ ಯೋಜನೆಯಡಿ ಎಷ್ಟು ಫಲಾನುಭವಿಗಳು ಲಾಭ ಪಡೆದುಕೊಂಡಿರುತ್ತಾರೆ; (ಸಂಪೂರ್ಣ ವಿವರಗಳನ್ನು ಫಲಾನುಭವಿಯ ಹೆಸರು ಸಮೇತ ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಪಶುಸಂಗೋಪನಾ ಇಲಾಖೆಯಿಂದ ಇಲ್ಲಿಯವರೆಗೆ ನೀಡಿದಂತಹ ಜಾನುವಾರುಗಳ ಪೈಕಿ ಎಷ್ಟು ಜಾನುವಾರುಗಳು ಮೃತಪಟ್ಟಿರುತ್ತವೆ; ಆರ್ಥಿಕ ವರ್ಷವಾರು ವಿತರಣೆಯಾದ ವಿವರ ಹಾಗೂ ಅದರಲ್ಲಿ ಮೃತವಾದಂತಹ ಜಾನುವಾರುಗಳೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು ಹಾಗೂ ವಿತರಿಸಲಾದ ಹಾಗೂ ಮೃತ ಹೊಂದಿದ ಜಾನುವಾರಗಳ ಶೇಕಡವಾರು ಮಾಹಿತಿ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೫೪ (೫೮೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಜಾರಿಯಲ್ಲಿರುವ ಯೋಜನೆಗಳು ಯಾವುವು; (ಯೋಜನೆವಾರು ವಿವರ ನೀಡುವುದು)

(ಆ) ೨೦೧೬–೧೭ ಮತ್ತು ೨೦೧೮–೧೯ ರ ಸಾಲಿನಲ್ಲಿ ಸರ್ಕಾರವು ಜಾರಿಗೆ ತಂದಿರುವ ಈ ಯೋಜನೆಗಳಿಗೆ ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳಿಗೆ ಎಷ್ಟು ಅನುದಾನ ಮೀಸಲಿಡಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ಈ ಯೋಜನೆಗಳಿಗೆ ಫಲಾನುಭವಿಗಳನ್ನು ಯಾವ ಮಾನದಂಡದ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತಿದೆ; (ವಿವರವಾದ ಮಾಹಿತಿ ನೀಡುವುದು)

(ಈ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆ ಹೊನ್ನಳಿ ಮತ್ತು ಚನ್ನಗಿರಿ ತಾಲ್ಲೂಕುಗಳಲ್ಲಿ ಯಾವ ಯಾವ ಯೋಜನೆಗಳಲ್ಲಿ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ? (ಯೋಜನೆವಾರು ಹಾಗೂ ತಾಲ್ಲೂಕುವಾರು ಫಲಾನುಭವಿಗಳ ಹೆಸರು ಸಮೇತ ವಿವರವಾದ ಮಾಹಿತಿ ನೀಡುವುದು)

## ಶಿವಮೊಗ್ಗ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆಯ ಅಡಿಯಲ್ಲಿ ಮಂಜೂರಾದ ಅನುದಾನ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೫೫ (೬೪೭) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭–೧೮ ಮತ್ತು ೨೦೧೮–೧೯ ನೇ ಸಾಲಿನಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆಯ ಅಡಿಯಲ್ಲಿ ಯಾತ್ರಿ ನಿವಾಸಕ್ಕೆ ಮಂಜೂರಾದ ಹಾಗೂ ಇದುವರೆಗೂ ಬಿಡುಗಡೆಯಾದ ಅನುದಾನ ಎಷ್ಟು;

(ಆ) ಬಿಡುಗಡೆ ಬಾಕಿ ಇರುವ ಅನುದಾನವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು) ಬಾಕಿ ಇರುವ ಅನುದಾನ ಬಿಡುಗಡೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಈ ಕುರಿತಂತೆ ಸರ್ಕಾರ ಕೈಗೊಂಡಿರುವ ಕ್ರಮವೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ನಿಗಮದ ವಿವಿಧ ಭವನಗಳ ನಿರ್ಮಾಣ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೪೫೬ (೬೫೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಸರ್ಕಾರದಿಂದ ಡಾ: ಬಿ.ಆರ್. ಅಂಬೇಡ್ಕರ್ ಮತ್ತು ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ ಹಾಗೂ ಇತರ ನಿಗಮಗಳಿಂದ ಭವನಗಳಿಗೆ, ಗ್ರಾಮ, ತಾಲ್ಲೂಕು ಮತ್ತು ಜಿಲ್ಲೆಗಳಲ್ಲಿ ಬಿಡುಗಡೆ ಮಾಡಲಾದ ಹಣ ಎಷ್ಟು; (ಕಳೆದ ಮೂರು ವರ್ಷಗಳಲ್ಲಿ ಕೈಗೊಂಡಿರುವ ಭವನವಾರು, ತಾಲ್ಲೂಕುವಾರು, ಸಂಪೂರ್ಣ ಮಾಹಿತಿ ನೀಡುವುದು)

(ಆ) ಬೀದರ್ ತಾಲ್ಲೂಕಿನಲ್ಲಿ ಎಷ್ಟು ಭವನಗಳಿವೇ; ಭವನಕ್ಕೆ ಮಂಜೂರು ಮಾಡಿರುವ ಹಣ ಎಷ್ಟು; (ವಿವರ ನೀಡುವುದು)

(ಇ) ಈ ನಿಗಮಗಳಿಂದ ಆಯಾ ಗ್ರಾಮ, ತಾಲ್ಲೂಕು, ಜಿಲ್ಲೆಯಲ್ಲಿ ಭವನಗಳ ಕಾಮಗಾರಿ ಯಾವ ಯಾವ ಹಂತದಲ್ಲಿವೆ ? (ಸಂಪೂರ್ಣ ಮಾಹಿತಿ ನೀಡುವುದು)

## ಭೂ ಒಡೆತನ ಯೋಜನೆಯಲ್ಲಿನ ಅವ್ಯವಹಾರದ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೪೫೭ (೬೫೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಡಾ: ಬಿ.ಆರ್. ಅಂಬೇಡ್ಕರ್ ಮತ್ತು ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ ಭೂ ಒಡೆತನ ಯೋಜನೆಯಡಿ

೨೦೧೫ ರಿಂದ ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ; (ಫಲಾನುಭವಿಗಳ ಹೆಸರು ಮತ್ತು ವಿಳಾಸ ಸಹಿತ ವಿವರವಾದ ಮಾಹಿತಿ ನೀಡುವುದು)

(ಆ) ಈ ಫಲಾನುಭವಿಗಳನ್ನು ಆಯ್ಕೆ ಮಾಡುವಲ್ಲಿ ಸರ್ಕಾರದ ಮಾನದಂಡಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಭೂ ಒಡೆತನ ಯೋಜನೆಯಡಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ನಕಲಿ ಪ್ರಮಾಣ ಪತ್ರವನ್ನು ಸೃಷ್ಟಿಸಿ ಜಮೀನು ಹೊಂದಿರುವವರನ್ನೇ ಆಯ್ಕೆ ಮಾಡುವಲ್ಲಿ ಕೆಲವು ಅಧಿಕಾರಿಗಳು ಸೇರಿ ಭಾರೀ ಅವ್ಯವಹಾರ ಮಾಡಲಾಗಿದೆ ಎಂಬ ಗಂಭೀರ ಆರೋಪ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗಿದೆಯೇ; ಕ್ರಮ ಜರುಗಿಸದಿದ್ದರೆ, ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಸಂಪೂರ್ಣವಾಗಿ ತನಿಖೆ ಮಾಡುವ ವಿಚಾರ ಸರ್ಕಾರದ ಮುಂದಿದೆಯೇ ; ಇದ್ದರೆ, ಯಾವ ಕಾಲಮಿತಿಯೊಳಗೆ ತನಿಖೆ ಮಾಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಹೆಸರುಕಾಳಿಗೆ ಬೆಂಬಲ ಬೆಲೆ ನೀಡುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೪೫೮ (೪೬೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ವತಿಯಿಂದ ಖರೀದಿಸುವ ಹೆಸರುಕಾಳಿಗೆ ನೀಡುವ ಬೆಂಬಲ ಬೆಲೆ ಎಷ್ಟು;

(ಆ) ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ವತಿಯಿಂದ ಎಷ್ಟು ಮೆಟ್ರಿಕ್ ಟನ್ ಹೆಸರುಕಾಳು ಖರೀದಿಸುವುದಾಗಿ ತಿಳಿಸಲಾಗಿತ್ತು ಈವರೆಗೆ ಎಷ್ಟು ಮೆಟ್ರಿಕ್ ಟನ್ ಹೆಸರುಕಾಳು ಖರೀದಿಸಲಾಗಿದೆ; ಇನ್ನು ಖರೀದಿಸಲು ಎಷ್ಟು ಬಾಕಿ ಇದೆ;

(ಇ) ರೈತರು ಬೆಳೆ ಬೆಳೆಗಳನ್ನು ಸರ್ಕಾರವು ಖರೀದಿಸದೆ ಇರುವುದರಿಂದ ಆತ್ಮಹತ್ಯೆಗೆ ಶರಣಾದ ರೈತರ ಸಂಖ್ಯೆ ಎಷ್ಟು;

(ಈ) ರೈತರ ಸಾಲ ಮನ್ನಾಕ್ಕಿಂತ ರೈತರ ಬೆಳೆದ ಬೆಳೆಗಳನ್ನು ಖರೀದಿಸುವ ಮೂಲಕ ರೈತರನ್ನು ಉಳಿಸುವ ಯಾವ ಕಾರ್ಯಕ್ರಮಗಳನ್ನು ಸರ್ಕಾರ ಕೈಗೊಂಡಿದೆ; ಇದುವರೆಗೆ ರೈತರಿಂದ ಯಾವ ಯಾವ ಬೆಳೆಗಳನ್ನು ಬೆಂಬಲ ಬೆಲೆ ನೀಡಿ ಖರೀದಿಸಲಾಗಿದೆ; ರೈತರು ಹೆಚ್ಚುವರಿ ಬೆಳೆದ ಬೆಳೆಗಳನ್ನು ಖರೀದಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಜೀತ ಮುಕ್ತಗೊಂಡವರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೪೫೯ (೪೬೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಜೀತ ಮುಕ್ತಗೊಂಡವರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) ಕಳೆದ ಎರಡು ವರ್ಷದಲ್ಲಿ ಜೀತ ಮುಕ್ತಗೊಂಡವರ ಹೆಸರು ಮತ್ತು ವಿಳಾಸವನ್ನು ಒದಗಿಸುವುದು;

(ಆ) ಜೀತ ಮುಕ್ತಗೊಂಡವರಿಗೆ ಸರ್ಕಾರ ಯಾವ ಯಾವ ಸೌಲಭ್ಯಗಳನ್ನು ನೀಡುತ್ತದೆ; ಕಳೆದ ಎರಡು ವರ್ಷಗಳಲ್ಲಿ ಈ ಸೌಲಭ್ಯಗಳನ್ನು ಪಡೆದುಕೊಂಡವರ ಸಂಖ್ಯೆ ಎಷ್ಟು;

(ಇ) ಜೀತ ಮಾಡಿಸುತ್ತಿದ್ದವರ ಮೇಲೆ ಯಾವ ಕ್ರಮ ಕೈಗೊಂಡಿದೆ; ಕೇಸು ದಾಖಲಿಸಿದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ ? (ಜಿಲ್ಲಾವಾರು ವಿವರ ನೀಡುವುದು)

## ಕೃಷಿ ಹೊಂಡಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೪೬೦ (೪೬೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ನಿರ್ಮಾಣಗೊಂಡಿರುವ ಕೃಷಿ ಹೊಂಡಗಳ ಸಂಖ್ಯೆ ಎಷ್ಟು; (ವರ್ಷವಾರು ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೃಷಿ ಹೊಂಡಗಳನ್ನು ನಿರ್ಮಿಸಲು ಕಳೆದ ಎರಡು ವರ್ಷಗಳಲ್ಲಿ ಸರ್ಕಾರವು ಮಾಡಿರುವ ವೆಚ್ಚ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸರ್ಕಾರದ ಸಹಾಯಾನುದಾನದಿಂದ ಕೃಷಿ ಹೊಂಡಗಳನ್ನು ನಿರ್ಮಿಸಿರುವ ಕೃಷಿಕರ ಹೆಸರು ಮತ್ತು ವಿಳಾಸ ಹಾಗೂ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಿಸಿರುತ್ತಾರೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಒಂದು ಕೃಷಿ ಹೊಂಡ ನಿರ್ಮಿಸಲು ಆಗುವ ವೆಚ್ಚ ಎಷ್ಟು; ಸರ್ಕಾರದ ಸಹಾಯ ಧನವೆಷ್ಟು;

(ಉ) ಕೃಷಿ ಹೊಂಡ ನಿರ್ಮಿಸಲು ಯಾವ ಯಾವ ಸಂಸ್ಥೆಗಳಿಗೆ ದರ ಕರಾರಿನ್ವಯ ಅವಕಾಶ ಕಲ್ಪಿಸಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ದೇಸಿ ಗೋವುಗಳ ಸಂರಕ್ಷಣೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೪೬೧ (೪೬೨) ಮಾನ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೇಸಿ ಗೋವುಗಳ ರಕ್ಷಣೆ ಅವುಗಳ ತಳಿ ಅಭಿವೃದ್ಧಿಗೆ ಸಂಬಂಧಿಸಿದಂತೆ ಸರ್ಕಾರ ಹಮ್ಮಿಕೊಂಡ ಕಾರ್ಯಕ್ರಮಗಳಾವುವು;

(ಆ) ಜಾನುವಾರುಗಳ ಅಕ್ರಮ ಸಾಗಾಟ ಮತ್ತು ಅನಧಿಕೃತ ಕಸಾಯಿ ಖಾನೆಗಳಲ್ಲಿ ಗೋವುಗಳನ್ನು ಮಾಂಸಕ್ಕಾಗಿ ಹತ್ಯೆ ಮಾಡುತ್ತಿರುವುದರಿಂದ ರಾಜ್ಯದಲ್ಲಿ ಗೋವುಗಳ ಪ್ರಮಾಣ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅಕ್ರಮವಾಗಿ ಗೋವುಗಳ ಸಾಗಾಟ ಮತ್ತು ಹತ್ಯೆಯನ್ನು ನಿಲ್ಲಿಸಲು ಗೋವುಗಳ ಸಂರಕ್ಷಣಾ ಕಾನೂನನ್ನು ರಚಿಸುವ ಬಗ್ಗೆ ಸರ್ಕಾರದ ನಿಲುವೇನು; ಗೋವುಗಳ ಸಂರಕ್ಷಣಾ ಕಾನೂನನ್ನು ಯಾವ ಕಾಲಮಿತಿಯೊಳಗೆ ರಚಿಸಲಾಗುವುದು ಮತ್ತು ಯಾವಾಗ ಜಾರಿಗೆ ತರಲಾಗುವುದು ?

## ರಾಜ್ಯದ ಪಶು ಆಸ್ಪತ್ರೆಗಳಲ್ಲಿ ವೈದ್ಯರ ನೇಮಕಾತಿ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ):–**

೪೬೨ (೪೬೧) ಮಾನ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಜಿಲ್ಲಾ, ತಾಲ್ಲೂಕು, ಹೋಬಳಿ ಮಟ್ಟದ ಪಶು ಆಸ್ಪತ್ರೆಗಳಲ್ಲಿ ಪಶು ಚಿಕಿತ್ಸೆ ಹಾಗೂ ಪ್ರಾಥಮಿಕ ಪಶು ಚಿಕಿತ್ಸಾಲಯಗಳಲ್ಲಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮೇಲ್ಕಂಡ ಪಶು ಆಸ್ಪತ್ರೆಗಳಿಗೆ ಮಂಜೂರಾದ ಹುದ್ದೆಗಳು ಎಷ್ಟು; ಎಷ್ಟು ಜನ ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಕೊರತೆ ಇರುವ ಪಶು ವೈದ್ಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪಶು ವೈದ್ಯರ ಕೊರತೆ ಇದ್ದಲ್ಲಿ ಎಷ್ಟು ಜನ ವೈದ್ಯರನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಚಿಂತನೆ ನಡೆಸಿದೆ ಮತ್ತು ನೇಮಕಾತಿ ಪ್ರಕ್ರಿಯೆ ಯಾವ ಹಂತದಲ್ಲಿದೆ;

(ಈ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವೈದ್ಯರ ಕೊರತೆ ನೀಗಿಸಲು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುವ ಪದ್ಧತಿ ಜಾರಿಯಲ್ಲಿದ್ದು, ಅದರಂತೆ ಪಶು ಸಂಗೋಪನೆ ಇಲಾಖೆಯಲ್ಲಿ ಮಾಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ?

## ಪ್ರಾಥಮಿಕ ಪಶು ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೪೬೩ (೫೮೬) ಮಾನ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳು ಎಷ್ಟು;

(ಆ) ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳನ್ನು ಪಶು ಚಿಕಿತ್ಸಾಯಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಇದೆಯೇ;

(ಇ) ಇದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕೊಡಗು ಜಿಲ್ಲೆಯಲ್ಲಿ ಸಂಭವಿಸಿದ ಪ್ರಕೃತಿ ವಿಕೋಪದ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೪೬೪ (೬೬೪) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಗಡು ಜಿಲ್ಲೆಯಲ್ಲಿ ಕಳೆದ ವರ್ಷ ಸಂಭವಿಸಿದ ಪ್ರಕೃತಿ ವಿಕೋಪದ ನಂತರ ಜಿಲ್ಲೆಗೆ ಭೇಟಿ ನೀಡುವ ಪ್ರವಾಸಿಗರ ಸಂಖ್ಯೆಯಲ್ಲಿ ಇಳಿಮುಖವಾಗಿದೆಯೇ;

(ಆ) ಹಾಗಿದ್ದಲ್ಲಿ, ಸುಸ್ಥಿರ ಹಾಗೂ ಪ್ರಕೃತಿ ಸ್ನೇಹಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ರೂಪಿಸಿರುವ ವಿನೂತನ ಕಾರ್ಯಕ್ರಮಗಳೇನು;

(ಇ) ೨೦೧೭–೧೮, ೨೦೧೮–೧೯ ಹಾಗೂ ೨೦೧೯–೨೦ (ಮೊದಲ ತ್ರೈಮಾಸಿಕದಲ್ಲಿ) ಜಿಲ್ಲೆಗೆ ಭೇಟಿ ನೀಡುರುವ ಪ್ರವಾಸಿಗರ ಸಂಖ್ಯೆ ಎಷ್ಟು ?

## ರಾಜ್ಯದ ಪ್ರವಾಸೋದ್ಯಮ ಇಲಾಖೆ ವ್ಯಾಪ್ತಿಯ ಪ್ರವಾಸಿ ತಾಣಗಳ ಬಗ್ಗೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ ( ನಾಮ ನಿರ್ದೇಶನ ಹೊಂದಿದವರು):–**

೪೬೫ (೪೭೭) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಪ್ರವಾಸಿ ತಾಣಗಳಾವುವು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಪ್ರವಾಸೋದ್ಯಮ ಇಲಾಖೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನದ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಕಳೆದ ೩ ವರ್ಷಗಳಲ್ಲಿ ಈ ಪ್ರವಾಸಿ ತಾಣಗಳ ಅಭಿವೃದ್ಧಿಗಾಗಿ ಬಿಡುಗಡೆ ಮಾಡಿದ ಅನುದಾನವೆಷ್ಟು ; (ತಾಲ್ಲೂಕುವಾರು, ಪ್ರವಾಸಿತಾಣವಾರು ಮಾಹಿತಿ ನೀಡುವುದು)

(ಈ) ಈ ಪ್ರವಾಸಿ ತಾಣವನ್ನು ಪ್ರಚಾರ ಪಡಿಸಲು ಸರ್ಕಾರ ರೂಪಿಸಿರುವ ಯೋಜನೆಗಳಾವುವು ; (ತಾಲ್ಲೂಕುವಾರು, ಪ್ರವಾಸಿತಾಣವಾರು ಮಾಹಿತಿ ನೀಡುವುದು)

(ಉ) ಹೈದ್ರಾಬಾದ್ ಕರ್ನಾಟಕ ಪ್ರದೇಶಕ್ಕೆ ೩೭೧(ಜೆ) ಅನ್ವಯ ವಿಶೇಷ ಸ್ಥಾನಮಾನ ನೀಡಿದ ನಂತರ ಈ ವ್ಯಾಪ್ತಿಯ ಎಷ್ಟು ಪ್ರವಾಸಿ ತಾಣಗಳಿಗೆ ವಿಶೇಷ ಅನುದಾನವನ್ನು ಬಿಡುಗಡೆ ಮಾಡಲಾಗಿದೆಯೇ; (ತಾಲ್ಲೂಕುವಾರು, ಪ್ರವಾಸಿತಾಣವಾರು ಮಾಹಿತಿ ನೀಡುವುದು)

## ತೋಟಗಾರಿಕೆ ವತಿಯಿಂದ ರೈತರಿಗೆ ನೀಡುವ ಯೋಜನೆಗಳ ಬಗ್ಗೆ

**ಶ್ರೀ ಸಿ. ಆರ್.ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬೬ (೪೭೩) ಮಾನ್ಯ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ತೋಟಗಾರಿಕೆ ಇಲಾಖೆ ವತಿಯಿಂದ ರೈತರಿಗೆ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; ಆ ಯೋಜನೆಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ನಿಗಧಿಪಡಿಸಿ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಇ) ಈ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ರೈತರಿಗೆ ಅನುಕೂಲ ಕಲ್ಪಿಸಲಾಗಿದೆಯೇ ; (ಸಂಪೂರ್ಣ ವಿವರಗಳನ್ನು ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನವು ಬಳಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವರ್ಷವಾರು ವಿವರಗಳನ್ನು ನೀಡುವುದು)

## ನೈಸರ್ಗಿಕ ವಿಕೋಪದಿಂದ ಆದ ಬೆಳೆ ನಷ್ಟ ಪರಿಹಾರ ಕುರಿತು

**ಡಾ॥ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೪೬೭ (೬೭೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳೆ ಹಾನಿ ಮತ್ತು ಇತರೆ ನೈಸರ್ಗಿಕ ವಿಕೋಪದಿಂದ ಬೆಳೆಗಳು ಹಾನಿಗೆ ಒಳಗಾದಲ್ಲಿ ಸರ್ಕಾರದಿಂದ ಪ್ರತಿ ರೈತರಿಗೆ ನೀಡುತ್ತಿರುವ ಪರಿಹಾರಧನದ ಮೊತ್ತ ಎಷ್ಟು ; (ವಿವರಗಳನ್ನು ನೀಡುವುದು)

(ಆ) ಈ ರೀತಿ ಬೆಳೆ ನಷ್ಟಕ್ಕೆ ರಾಜ್ಯದಲ್ಲಿ ಕಳೆದ ೩ ವರ್ಷಗಳಿಂದ ತೊಂದರೆಗೊಳಗಾಗಿರುವ ರೈತರ ಸಂಖ್ಯೆ ಎಷ್ಟು ; ಬೆಳೆ ನಷ್ಟದ ಪ್ರಮಾಣ ಎಷ್ಟು ; ಹಾಗೂ ಸರ್ಕಾರದಿಂದ ಬಿಡುಗಡೆಯಾಗಿರುವ ಮತ್ತು ಬಾಕಿ ಉಳಿಸಿಕೊಂಡಿರುವ ಪರಿಹಾರ ಧನದ ಮೊತ್ತ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆಯಡಿ ಬೆಳೆ ವಿಮೆ ಮಾಡಿಸಲು ಅರ್ಜಿ ಸಲ್ಲಿಸಿರುವ ರೈತರ ಸಂಖ್ಯೆ ಎಷ್ಟು ; ಇದರಲ್ಲಿ ವಿಮೆ ಪಡೆದ ರೈತರು ಮತ್ತು ಪಡೆದಿರುವ ವಿಮೆಯ ಮೊತ್ತವೆಷ್ಟು; (ವಿವರಗಳನ್ನು ನೀಡುವುದು)

(ಈ) ಈ ಯೋಜನೆಯಡಿ ಅರ್ಜಿ ಸಲ್ಲಿಸಿಯೂ ವಿಮೆ ಪಡೆಯದ (ನೀಡದ) ರೈತರ ಸಂಖ್ಯೆ ಎಷ್ಟು ; ಇದಕ್ಕೆ ಕಾರಣಗಳೇನು ? (ಮಾಹಿತಿ ನೀಡುವುದು)

## ಪ್ರವಾಸೋದ್ಯಮ ಇಲಾಖೆಯ ಯೋಜನೆಗಳ ಕುರಿತು

**ಡಾ॥ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೪೬೮ (೬೭೦) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರವಾಸೋದ್ಯಮ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಾವುವು ; (ಮಾಹಿತಿ ನೀಡುವುದು)

(ಆ) ವಿದ್ಯಾವಂತ ನಿರುದ್ಯೋಗಿಗಳಿಗೆ ಇಲಾಖಾ ವತಿಯಿಂದ ಟೂರಿಸ್ಟ್ ಟ್ಯಾಕ್ಸಿ ನೀಡಲಾಗುತ್ತಿರುವ ಸಹಾಯಧನದ ಮೊತ್ತವೆಷ್ಟು ; ಇದಕ್ಕೆ ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ಕಳೆದ ಮೂರು ವರ್ಷಗಳಿಂದ ಎಷ್ಟು ಜನ ನಿರುದ್ಯೋಗಿ ಯುವಕರಿಗೆ ಟೂರಿಸ್ಟ್ ಟ್ಯಾಕ್ಸಿ ಸೌಲಭ್ಯವನ್ನು ಕಲ್ಪಿಸಲಾಗಿದೆ ? (ವಿವರಗಳನ್ನು ನೀಡುವುದು)

## ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅನುದಾನದ ವಿವರ

**ಡಾ॥ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೪೬೯ (೬೭೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಯೋಜನಾವಾರು ಸರ್ಕಾರದ ಸಾಂಸ್ಥಿಕ ಕೋಟಾ/ ನಿರ್ದೇಶಕರ ಮಂಡಳಿ ಕೋಟಾದಡಿ ಮಂಜೂರಾತಿ ನೀಡಲಾದ

ಫಲಾನುಭವಿಗಳ ಸಂಖ್ಯೆ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ಪಟ್ಟಿ ನೀಡುವುದು)

(ಆ) ಈ ರೀತಿ ಸರ್ಕಾರದ ಸಾಂಸ್ಥಿಕ ಕೋಟಾ/ ನಿರ್ದೇಶಕರ ಮಂಡಳಿ ಸಾಂಸ್ಥಿಕ ಕೋಟಾದಡಿ ಮಂಜೂರಾತಿ ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು ? (ಮಾಹಿತಿ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯ ನಿಗಮಗಳ ಅನುದಾನ ಕುರಿತು

**ಡಾ॥ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೪೭೦ (೬೭೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ ನಿಗಮಗಳಿಗೆ ಕಳೆದ ಐದು ವರ್ಷಗಳಿಂದ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು; (ನಿಗಮವಾರು ವಿವರ ನೀಡುವುದು)

(ಆ) ಈ ನಿಗಮಗಳಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಯಾವುವು ; (ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು) ಯೋಜನಾವಾರು ನೀಡುತ್ತಿರುವ ಸಹಾಯಧನದ ಮೊತ್ತವೆಷ್ಟು ; ಘಟಕ ಸ್ಥಾಪನೆಯಾಗಿರುವ ಬಗ್ಗೆ ಮಾಹಿತಿ ಇದೆಯೇ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಇ) ಈ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅನುಸರಿಸುತ್ತಿರುವ ಮಾನದಂಡಗಳೇನು ; (ಮಾಹಿತಿ ನೀಡುವುದು)

(ಈ) ಸರ್ಕಾರದಿಂದ ಬಿಡುಗಡೆಯಾದ ಅನುದಾನವನ್ನು ಆಯಾ ಆರ್ಥಿಕ ವರ್ಷದಲ್ಲಿಯೇ ಖರ್ಚು ಮಾಡಲಾಗಿದೆಯೇ ? (ಮಾಹಿತಿ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಹಿಂದುಳಿದ ವರ್ಗಗಳ ವಸತಿ ನಿಲಯಗಳ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳಿಯ ಸಂಸ್ಥೆಗಳ ಕ್ಷೇತ್ರ):–**

೪೭೧ (೪೬೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಹಿಂದುಳಿದ ವರ್ಗಗಳ ವಸತಿ ನಿಲಯಗಳಲ್ಲಿ ಅಗತ್ಯ ಮೂಲ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಮೂಲಭೂತ ಸೌಲಭ್ಯಗಳೊಂದಿಗೆ ಅವುಗಳ ಸ್ವಚ್ಛತೆ ಮತ್ತು ದುರಸ್ತಿ ಕಾರ್ಯಗಳನ್ನು ಯಾವಾಗ ಮಾಡಲಾಗುವುದು; (ವಿವರ ನೀಡುವುದು)

(ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಎಷ್ಟು ಹಿಂದುಳಿದ ವರ್ಗಗಳ ವಸತಿ ನಿಲಯಗಳಿವೆ ? (ಸಂಪೂರ್ಣ ವಿವರ ನೀಡುವುದು)

## ಕಲಬುರಗಿ ಕಂದಾಯ ವಿಭಾಗದ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೭೨ (೪೬೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಕಂದಾಯ ವಿಭಾಗ ವ್ಯಾಪ್ತಿಯಲ್ಲಿ ಬರುವ ಕಲಬುರಗಿ, ಬೀದರ್, ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿರುವ ಕೃಷಿ ಇಲಾಖೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಹುದ್ದೆಗಳು ಖಾಲಿ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕಛೇರಿಗಳಿಗೆ ಮಂಜೂರಾಗಿರುವ ಹಾಗೂ ಭರ್ತಿಯಾಗಿರುವ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಖಾಲಿ ಉಳಿದಿರುವ ಹುದ್ದೆಗಳ ಭರ್ತಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಮಗ್ರ ಮಾಹಿತಿ ನೀಡುವುದು)

(ಈ) ಹುದ್ದೆಗಳು ಖಾಲಿ ಉಳಿದಿರುವುದರಿಂದ ಯೋಜನೆಗಳ ಅನುಷ್ಠಾನಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ನಿಟ್ಟಿನಲ್ಲಿ ಯಾವ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ವಿಶೇಷ ಘಟಕ ಯೋಜನೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೭೩ (೪೬೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಿಶೇಷ ಘಟಕ ಯೋಜನೆಯಡಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳು/ ಯೋಜನೆಗಳು ಯಾವುವು ; (ವಿವರ ನೀಡುವುದು)

(ಆ) ಪ್ರತಿ ವರ್ಷ ಈ ಜಿಲ್ಲೆಗಳಿಗೆ ವೆಚ್ಚ ಮಾಡಲಾಗಿರುವ ಹಣವೆಷ್ಟು ; ಸಿ.ಸಿ. ರಸ್ತೆ ಸಮುದಾಯ ಭವನಗಳ ನಿರ್ಮಾಣ ಮತ್ತು ಇತರ ಸೌಲಭ್ಯಗಳು ಯಾವುವು ? (ವಿವರ ನೀಡುವುದು)

# ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪ್ರವಾಸೋದ್ಯಮದ ಅಭಿವೃದ್ಧಿ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೭೪ (೪೬೭) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು ; (ಮಾಹಿತಿ ನೀಡುವುದು)

(ಆ) ಈ ಮೇಲ್ಕಂಡ ಜಿಲ್ಲೆಗಳಲ್ಲಿ ಪ್ರವಾಸಿಗರು ಉಳಿದುಕೊಳ್ಳಲು ಇಲಾಖೆ ವತಿಯಿಂದ ಎಷ್ಟು ಯಾತ್ರಿ ನಿವಾಸಗಳನ್ನು ನಿರ್ಮಿಸಲಾಗಿದೆ ? (ವಿವರ ನೀಡುವುದು)

# ನಿಂಬೆ ಬೆಳೆಗಾರರ ಸಂಕಷ್ಟದ ಕುರಿತು

**ಶ್ರೀ ಸುನಿಲ್ ಗೌಡ ಬಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೭೫ (೭೫೫) ಮಾನ್ಯ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನಿಂಬೆ ಬೆಳೆಗಾರರು ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪರಿಹಾರ ನೀಡಲು ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ನಿಂಬೆ ಬೆಳೆಗಾರರಿಗೆ ಸರ್ಕಾರದಿಂದ ಪರಿಹಾರ ಏನಾದರೂ ನೀಡಲಾಗಿದೆಯೇ ; ನೀಡಲಾಗಿದ್ದಲ್ಲಿ, ಎಷ್ಟು ಪರಿಹಾರ ನೀಡಲಾಗಿದೆ; (ವಿವರ ನೀಡುವುದು)

(ಇ) ನಿಂಬೆ ಬೆಳೆಗಾರರಿಗೆ ಪರಹಾರ ನೀಡಲಾಗಿಲ್ಲದಿದ್ದಲ್ಲಿ ಯಾವಾಗ ಪರಿಹಾರ ನೀಡಲಾಗುವುದು?

# ಹಿಂದುಳಿದ ವರ್ಗದ ವಿದ್ಯಾರ್ಥಿ /ವಿದ್ಯಾರ್ಥಿನಿಯರ ವೈದ್ಯಕೀಯ ಹಾಗೂ ತಾಂತ್ರಿಕ ಶಿಕ್ಷಣದ ವಸತಿ ನಿಲಯಗಳನ್ನು ಪ್ರಾರಂಭಿಸುವ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೭೬ (೫೯೧) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ನಗರದಲ್ಲಿ ವೈದ್ಯಕೀಯ ಹಾಗೂ ತಾಂತ್ರಿಕ ಶಿಕ್ಷಣದಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗದ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ೧೦೦ ಸಂಖ್ಯಾಬಲದ ವಸತಿ ನಿಲಯದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ವಸತಿ ನಿಲಯುಗಳನ್ನು ಯಾವಾಗ ಪ್ರಾರಂಭಿಸಲಾಗುವುದು ?

# ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಯನ್ನು ಪ್ರಾರಂಭಿಸುವ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೭೭ (೫೮೮) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಮೇಕಳಿ ಗ್ರಾಮಕ್ಕೆ ಮಂಜೂರಾದ ಹಿಂದುಳಿದ ವರ್ಗದ ಅಟಲ್ ಬಿಹಾರಿ ವಾಜಪೇಯಿ

ವಸತಿ ಶಾಲೆಯು ಇನ್ನೂ ಪ್ರಾರಂಭವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈವರೆಗೆ ಸದರಿ ವಸತಿ ಶಾಲೆಯು ಪ್ರಾರಂಭವಾಗದಿರಲು ಕಾರಣಗಳೇನು ;

(ಆ) ೨೦೧೯–೨೦ನೇ ಶೈಕ್ಷಣಿಕ ವರ್ಷದಲ್ಲಿ ಯಾವಾಗ ವಸತಿ ಶಾಲೆಯನ್ನು ಪ್ರಾರಂಭಿಸಲಾಗುವುದು ;

(ಇ) ಸದರಿ ವಸತಿ ಶಾಲೆಯು ಸ್ವಂತ ಕಟ್ಟಡ ನಿರ್ಮಾಣವಾಗಿದೆಯೇ; ನಿರ್ಮಾಣವಾಗದೇ ಇದ್ದಲ್ಲಿ, ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ? ಎಷ್ಟು ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ಹಿಂದುಳಿದ ವರ್ಗದ ವಸತಿ ಶಾಲೆ/ ನಿಲಯಗಳನ್ನು ಪ್ರಾರಂಭಿಸುವ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೭೮ (೫೯೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ರಾಯಭಾಗ ಖಾನಾಪುರ, ಬೈಲಹೊಂಗಲ, ಕಿತ್ತೂರು, ರಾಮದುರ್ಗ, ಚಿಕ್ಕೋಡಿ ತಾಲ್ಲೂಕುಗಳಲ್ಲಿ ೫೦ ಸಂಖ್ಯಾಬಲದ ಮೆಟ್ರಿಕ್ ಪೂರ್ವ ವಸತಿ ಶಾಲೆ ಹಾಗೂ ೧೦೦ ಸಂಖ್ಯಾ ಬಲದ ಹಿಂದುಳಿದ ವರ್ಗದ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಸತಿ ನಿಲಯಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ವಸತಿ ಶಾಲೆ/ನಿಲಯಗಳನ್ನು ಯಾವಾಗ ಪ್ರಾರಂಭಿಸಲಾಗುವುದು ?

# ಹಿಂದುಳಿದ ವರ್ಗದ ಅಲೆಮಾರಿ/ಅರೆ ಅಲೆಮಾರಿ ವಸತಿ ಶಾಲೆಯನ್ನು ಪ್ರಾರಂಭಿಸುವ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೭೯ (೫೮೯) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ರಾಯಭಾಗ ಗ್ರಾಮೀಣ ವ್ಯಾಪ್ತಿಯ ಶಾಹುಪಾರ್ಕ್ ಮತ್ತು ಗೋಕಾಕ ತಾಲ್ಲೂಕಿನಲ್ಲಿ ಅತಿಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುವ ಹಿಂದುಳಿದ ವರ್ಗದ ಅಲೆಮಾರಿ/ಅರೆ ಅಲೆಮಾರಿ ಸಮುದಾಯದ ವಿದ್ಯಾರ್ಥಿಗಳಿಗಾಗಿ ಸರ್ಕಾರವು ವಸತಿ ಶಾಲೆಯನ್ನು ಪ್ರಾರಂಭಿಸುವುದೇ ;

(ಆ) ಪ್ರಾರಂಭಿಸುವುದಾದಲ್ಲಿ ಯಾವಾಗ ಪ್ರಾರಂಭಿಸಲಾಗುವುದು ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 090/300 ಪ್ರತಿಗಳು/16–07–2019